159ನೇ೭
15

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ ಇವರು ನಿಯಮ-330ರಡಿ ನೀಡಿರುವ ಸೂಚನೆಗೆ ಉತ್ತರ.**

**ವಿಷಯ:**

ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಹಿಂದಿನ ಡಿಫೈನ್ಸ್ ಪಿಂಚಣಿ ಯೋಜನೆಗೆ ಒಳಪಡಿಸಿ ಆರ್ಥಿಕ ಇಲಾಖೆಯು ಹಲವು ಇಲಾಖೆಗಳ ನೌಕರರಿಗೆ ಹಳೆಯ ಡಿಫೈನ್ಸ್ ಪಿಂಚಣಿ ಯೋಜನೆಯನ್ನು ಅನುಮೋದಿಸಿ ಆದೇಶ ಹೊರಡಿಸಲಾಗಿದೆ. ಬೆಂಗಳೂರು ನೀರು ಸರಬರಾಜು ಮಂಡಳಿಯ ನೌಕರರಿಗೂ ಸಹ ಹಳೆಯ ಪಿಂಚಣಿ ಯೋಜನೆಯನ್ನು ವಿಸ್ತರಿಸಿ ಆದೇಶ ಹೊರಡಿಸಲಾಗಿದೆ. ಅದೇ ರೀತಿ ವಿಶ್ವವಿದ್ಯಾಲಯಗಳಲ್ಲಿ ದಿ:01.04.2006ರ ಪೂರ್ವದಲ್ಲಿ ನೇಮಕಾತಿ ಅಧಿಸೂಚನೆಗಳ ಮೂಲಕ ಅಥವಾ ಆ ದಿನಾಂಕದಂದು ಅಥವಾ ನಂತರದಲ್ಲಿ ವಿಶ್ವವಿದ್ಯಾಲಯದ ಸೇವೆಗೆ ಸೇರಿರುವ ನೌಕರಿಗೆ ಹಳೆಯ ಡಿಫೈನ್ಸ್ ಪಿಂಚಣಿ ಯೋಜನೆಗೆ ಅನುಮೋದನೆ ನೀಡಿ ಆದೇಶ ಹೊರಡಿಸಬೇಕೆಂಬ ವಿಷಯವನ್ನು ನಿಯಮ 330ರಲ್ಲಿ ಮಾನ್ಯ ಉನ್ನತ ಶಿಕ್ಷಣ ಸಚಿವರಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಉತ್ತರ:-**

ರಾಜ್ಯ ಸರ್ಕಾರದ ಸೇವೆಗೆ ದಿನಾಂಕ:01.04.2006ರಂದು ಅಥವಾ ತರುವಾಯ ಸೇರುವ ಎಲ್ಲಾ ನೇಮಕಾತಿದಾರರಿಗೆ ಕಡ್ಡಾಯಗೊಳ್ಳುವಂತೆ ಈ ಮುನ್ನ ಜಾರಿಯಲ್ಲಿದ್ದ ಪ್ರಯೋಜನಾತ್ಮಕ ನಿವೃತ್ತಿ ಸೌಲಭ್ಯಕ್ಕೆ ಬದಲಾಗಿ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಕೊಡುಗೆ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: FD (Spl) 4 PET 2005, ದಿನಾಂಕ:31.03.2006ರಲ್ಲಿ ಜಾರಿಗೊಳಿಸಲಾಗಿದೆ.

ದಿನಾಂಕ:01.04.2006ರ ನಂತದಲ್ಲಿ ಸರ್ಕಾರಿ ಸೇವೆಗೆ ಹೊಸದಾಗಿ ಸೇರುವ ನೌಕರರ ಪ್ರಕರಣಗಳಲ್ಲಿ ಹಿಂದಿನ ಡಿಫೈನ್ಸ್ ಪಿಂಚಣಿ ಯೋಜನೆಯು ಅನ್ವಯವಾಗತಕ್ಕದ್ದಲ್ಲ. ಈ ಹಿನ್ನಲೆಯಲ್ಲಿ, ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿಗಳ ನಿಯಮಗಳಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: FD 02 FRA 2010, ದಿನಾಂಕ:19.11.2010ರ ಮೇರೆಗೆ ತಿದ್ದುಪಡಿಯನ್ನು ತಂದಿದ್ದು, ಅದರನ್ವಯ ಸೇರ್ಪಡೆಗೊಳಿಸಲಾಗಿರುವ ಹೊಸ ನಿಯಮ 2-ಸಿ ರಂತೆ 2ನೇ ನಿಯಮದ (1) ನೇ ಉಪ ನಿಯಮದಲ್ಲಿ ಏನೇ ಒಳಗೊಂಡಿದ್ದಾಗ್ಯೂ, ಈ ನಿಯಮಗಳ ಭಾಗ -IV (1) ನೇ ಏಪ್ರಿಲ್ 2006 ರಂದು ಅಥವಾ ತರುವಾಯ ರಾಜ್ಯ ಸರ್ಕಾರಿ ಸೇವೆಗೆ ಸೇರುವ ಹೊಸ ನೌಕರರಿಗೆ ಅನ್ವಯವಾಗತಕ್ಕದ್ದಲ್ಲ.

ಸರ್ಕಾರದ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:24.10.2024ರ ಆದೇಶದನ್ವಯ ದಿನಾಂಕ:01.04.2006 ರ ಪೂರ್ವದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಖಾಲಿ ಹುದ್ದೆಗಳ ಭರ್ತಿಗಾಗಿ ಹೊರಡಿಸಿದ ನೇಮಕಾತಿ ಅಧಿಸೂಚನೆಗಳ ಮೇರೆಗೆ ಆಯ್ಕೆ ಹೊಂದಿ ದಿನಾಂಕ: 01.04.2006 ರಂದು ಅಥವಾ ಆ ದಿನಾಂಕದ ನಂತರ ಸೇವೆಗೆ ಸೇರಿರುವ ಕಾರಣದಿಂದ ನೂತನ ಅಂಶದಾಯಿ ಕೊಡುಗೆ ಯೋಜನೆಯ (ರಾಷ್ಟ್ರೀಯ ಪಿಂಚಣಿ ಯೋಜನೆ) ವ್ಯಾಪ್ತಿಗೊಳಪಟ್ಟಿರುವ ಸರ್ಕಾರಿ ನೌಕರರನ್ನು ಸರ್ಕಾರವು ಅವರ ಅಭಿಮತದ ಮೇರೆಗೆ ಕೆಲವು ಷರತ್ತುಗಳಿಗೊಳಪಟ್ಟು ಒಂದು ಬಾರಿಯ ಕ್ರಮವಾಗಿ ಹಿಂದಿನ ಡಿಫೈನ್ಸ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಿಸಲು ಒಪ್ಪಿಗೆ ನೀಡಿದೆ. ಈ ಆದೇಶವು ರಾಜ್ಯ ಸಿವಿಲ್ ಸೇವೆಯಲ್ಲಿನ ಹುದ್ದೆಗಳಿಗೆ ಅನ್ವಯವಾಗುವುದರಿಂದ, ನಿಗಮ/ಮಂಡಳಿ/ವಿಶ್ವವಿದ್ಯಾಲಯಗಳು/ಇತರೆ ಸ್ವಾಯತ್ತಸಂಸ್ಥೆಗಳ ನೌಕರರಿಗೆ ಅನ್ವಯಿಸುವುದಿಲ್ಲ.

*******

**ಸಂಖ್ಯೆ: ಇಡಿ 172 ಯುಎನ್ಇ 2026**

**(ಬಸವರಾಜ ರಾಯರಡ್ಡಿ)**
ಉನ್ನತ ಶಿಕ್ಷಣ ಸಚಿವರು